ದಿನಾಂಕ: 20.02.2021 ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ ಶ್ರೀ ಲಿಂಗಣ್ಣ ಗುಂಡಳ್ಳಿ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

7. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
8. ಶ್ರೀ ನಾಗರಾಜ್, ಸಹಾಯಕ ಅಭಿಯಂತರರು, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.
9. ಶ್ರೀಮತಿ ರೇಷ್ಮ, ಸಹಾಯಕ ಅಭಿಯಂತರರು, ಎಸ್.ಡ್ಬ್ಲ್ಯೂ.ಎಂ.
10. ಶ್ರೀ ಆನಂದ್, ಸಹಾಯಕ ಅಭಿಯಂತರರು , ಬೆಸ್ಕಾಂ
11. ಶ್ರೀ ಶಿವಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು
12. ಶ್ರೀ ವಿಜಯ್, ಎ.ಎಸ್.ಐ. ರಾಜಾಜಿನನಗರ ಸಂಚಾರಿ ಪೋಲಿಸ್ ಠಾಣೆ
13. ಶ್ರೀ ಯೋಗೇಶ್, ಹೆಡ್ ಕಾನ್ಸ್ ಟೇಬಲ್,
14. ಶ್ರೀ ಮಂಜುನಾಥ್, ಹೆಡ್ ಕಾನ್ಸ್ ಟೇಬಲ್
15. ಶ್ರೀ ವೆಂಕಟೇಶ್, ಕಂದಾಯ ವಸೂಲಿಗಾರರು,
16. ಶ್ರೀ ರವಿ, ಕಂದಾಯ ವಸೂಲಿಗಾರರು
17. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ
18. ಶ್ರೀ ನಾಗರಾಜ್, ತೋಟಗಾರಿಕೆ ಇಲಾಖೆ
19. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
20. ಶ್ರೀ ನರಸಿಂಹ, ಕೆಲಸ ಪರಿವೀಕ್ಷಕರು, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.
21. ಶ್ರೀ ರಮೇಶ್, ಪಶು ಸಂಘೋಪನ ಇಲಾಖೆ.
22. ಶ್ರೀ ಶರಣಬಸವ, ಮಾರ್ಷಲ್

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಕಳೆದ ಸಭೆಯಲ್ಲಿ 12ನೇ ಮುಖ್ಯ ರಸ್ತೆ, ಶಿವನಗರದ ನ್ಯಾಯಬೆಲೆ ಅಂಗಡಿ ಹತ್ತಿರ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ನಾಯಿಗಳನ್ನು ಹಿಡಿಯ್ಯಲು ಕ್ರಮ ವಹಿಸಲು ತಿಳಿಸಲಾಗಿತ್ತು. ಆದರೆ ಇದುವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಶ್ರೀ ರಮೇಶ್, ಪಶು ಸಂಘೋಪನ ಇಲಾಖೆ ರವರು ಮುಂದಿನ ಸಭೆಯೊಳಗೆ ಕ್ರಮ ಕೈಗೊಂಡು ವರದಿ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.
2. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಪೈಪ್ ಅಳವಡಿಸುವ ಕಾಮಗಾರಿಯನ್ನು ನಿರ್ವಹಿಸಲಾಗಿರುತ್ತದೆ. ಆದರೆ ಮಳೆ ಬಂದ ಮೇಲೆ ಪೈಪ್ ಅಳವಡಿಸಿರುವ ಜಾಗದಲ್ಲಿ ಮಣ್ಣು ಕುಸಿದಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ರವರು ಕಾಮಗಾರಿಯು ಪ್ರಗತಿಯಲ್ಲಿದ್ದು, ಕುಸಿದಿರುವ ಜಾಗವನ್ನು ದುರಸ್ಥಿಪಡಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.
3. ಶ್ರೀ ವಿಜಯಕುಮಾರ್, ಸಾರ್ವಜನಿಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚಿನ ದಿನಗಳಲ್ಲಿ ಸೊಳ್ಳೆ ಔಷಧಿ ಮತ್ತು ಫಾಗಿಂಗ್‌ನ್ನು ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ಈ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.
4. ಶ್ರೀ ವಸಂತ್‌ಕುಮಾರ್, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸುವ ರಸ್ತೆಯನ್ನು ಕತ್ತರಿಸಿದ್ದು, ಕೆಲವು ಕಡೆ ರಸ್ತೆಯನ್ನು ದುರಸ್ಥಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಬೆಸ್ಕಾಂ ರವರು ಮಾತನಾಡುತ್ತಾ ದುರಸ್ಥಿಪಡಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

Scanned by CamScanner

5. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ತಿಮ್ಮಯ್ಯ ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಪಾದಚಾರಿ ಮಾರ್ಗದಲ್ಲಿ ಕಬ್ಬಿಣದ ರಾಡ್‌ಗಳನ್ನು ಅಳವಡಿಸಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಇದರ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡುತ್ತಾ, ಕಬ್ಬಿಣದ ರಾಡ್‌ಗಳನ್ನು ಕತ್ತರಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.
6. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ತಿಮ್ಮಯ್ಯ ರಸ್ತೆಯಲ್ಲಿರುವ ಅನ್ನಪೂರ್ಣೇಶ್ವರಿ ಹೋಟೆಲ್ ಮುಂಭಾಗದಲ್ಲಿರುವ ಮರದ ಕೊಂಬೆಯು ರಸ್ತೆಗೆ ಬಾಗಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವುದರಿಂದ ಸದರಿ ಮರದ ಕೊಂಬೆಯನ್ನು ತೆರವುಗೊಳ್ಳಿಸುವಂತೆ ಅರಣ್ಯ ಇಲಾಖೆ ತಿಳಿಸಿದರು.
7. ದಿನಸಿ ಅಂಗಡಿ ಹಾಗೂ ತಳ್ಳುವ ಗಾಡಿಗಳಲ್ಲಿ ಮಾರಾಟ ಮಾಡುವ ವ್ಯಾಪಾರಿಗಳು ಪ್ಲಾಸ್ಟಿಕ್ ಕವರ್ ನೀಡುತ್ತಿದ್ದು, ಇದರ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು. ಇದಕ್ಕೆ ಉತ್ತರವಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಈಗಾಗಲೇ ಪ್ಲಾಸ್ಟಿಕ್ ಕವರ್‌ಗಳನ್ನು ನೀಡುತ್ತಿರುವ ಅಂಗಡಿಗಳಿಗೆ ದಂಡವನ್ನು ವಿಧಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
8. ಪಾಲಿಕೆಯ ಆಯವ್ಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕಳೆದ ಸಾಲಿನ Spill Over ಕಾಮಗಾರಿಗಳನ್ನು ಮುಂದುವರೆಸಲು, ಜನ ದಟ್ಟಣೆ ಇರುವ ಜಾಗಗಳಲ್ಲಿ ಇ-ಶೌಚಾಲಯವನ್ನು ನಿರ್ಮಿಸಲು, ಹದಗೆಟ್ಟಿರುವ ರಸ್ತೆಗಳನ್ನು ಡಾಂಬರೀಕರಣ ಮಾಡುವುದು, ಚರಂಡಿ ಮತ್ತು ಪಾದಚಾರಿ ಮಾರ್ಗವನ್ನು ಅಭಿವೃದ್ಧಿ ಪಡಿಸುವುದು. ಮತ್ತು ರಸ್ತೆಗಳಿಗೆ ಸಿಸಿ ಕ್ಯಾಮರಗಳನ್ನು ಅಳವಡಿಸುವುದು. ವಾರ್ಡ್ ವ್ಯಾಪ್ತಿಯಲ್ಲಿ ಇಂಗು ಗುಂಡಿಗಳನ್ನು ನಿರ್ಮಾಣ ಮಾಡುವುದು. ಪೌರಕಾರ್ಮಿಕರ ಮಸ್ಟಿರಿಂಗ್ ಸ್ಥಳಗಳಲ್ಲಿ ಶೌಚಾಲಯ ಹಾಗೂ ವಿಶ್ರಾಂತಿ ಪಡೆಯಲು ಕೊಠಡಿಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳನ್ನು ಆಯವ್ಯಯದಲ್ಲಿ ಸೇರಿಸಿ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು
ವಾರ್ಡ್ ನಂ. 107

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ, ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner